# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** 849

**ಸದಸ್ಯರ ಹೆಸರು** : ಶ್ರೀ. ಎಂ.ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 26.12.2022

**ಉತ್ತರಿಸುವ ಸಚಿವರು** : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಸರ್ಕಾರವು ಕನ್ನಡ ಭಾಷೆಯನ್ನು ಹೆಚ್ಚಾಗಿ ಅಂತರ್ಜಾಲದಲ್ಲಿ ಬಳಸುವುದಕ್ಕೆ ಉತ್ತೇಜನ ನೀಡಲು ಏನು ಕ್ರಮ ಕೈಗೊಂಡಿದೆ; (ವಿವರ ನೀಡುವುದು) | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕನ್ನಡ ಭಾಷೆಯನ್ನು ಹೆಚ್ಚಾಗಿ ಅಂತರ್ಜಾಲದಲ್ಲಿ ಬಳಸುವುದಕ್ಕೆ ಉತ್ತೇಜನ ನೀಡಲು ಸಭೆ ನಡೆಸಿ, ಇ-ಕಲಿಕಾ ಕನ್ನಡ ಪೋರ್ಟಲ್, ಪದಕಣಜ ಮತ್ತು ದೇಸೀಕರಣ, ಇ-ಆಡಳಿತದಲ್ಲಿ ಕನ್ನಡ ಬಳಕೆ ಇನ್ನಿತರ ಕ್ರಮಗಳನ್ನು ಕೈಗೊಳ್ಳುತ್ತಿದೆ.<br><br>ಕನ್ನಡ ಪುಸ್ತಕ ಪ್ರಾಧಿಕಾರದಿಂದ "ಕನ್ನಡ ಅಭಿಜಾತ ಸಾಹಿತ್ಯ ಕಲ್ಯಾಣ ಯೋಜನೆ"ಯಡಿ ಕವಿರಾಜಮಾರ್ಗದಿಂದ ಮುದ್ದಣನವರೆಗಿನ ಎಲ್ಲಾ ಪುಸ್ತಕಗಳನ್ನು ತಂತ್ರಾಂಶಕ್ಕೆ ಒಳಪಡಿಸುವ ಯೋಜನೆ ಪ್ರಗತಿಯಲ್ಲಿರುತ್ತದೆ. |
| ಆ) | ಗ್ರಾಮೀಣ ಪ್ರದೇಶದ ರೈತರ ಮಕ್ಕಳಿಗೆ ಉನ್ನತ ಶಿಕ್ಷಣವನ್ನು ಕನ್ನಡ ಭಾಷೆಯಲ್ಲಿ ನೀಡಲು ಸರ್ಕಾರವು ಏನು ಕ್ರಮ ಕೈಗೊಂಡಿದೆ; (ವಿವರ ನೀಡುವುದು) | ಗ್ರಾಮೀಣ ಪ್ರದೇಶದ ರೈತರ ಮಕ್ಕಳಿಗೆ ಉನ್ನತ ಶಿಕ್ಷಣವನ್ನು ಕನ್ನಡ ಭಾಷೆಯಲ್ಲಿ ನೀಡುವ ಕುರಿತು ಉನ್ನತ ಶಿಕ್ಷಣ ಇಲಾಖೆ ಕ್ರಮವಹಿಸಬೇಕಿರುತ್ತದೆ. |
| ಇ) | ರಾಜ್ಯದಲ್ಲಿ ಎಷ್ಟು ಕನ್ನಡ ಭವನಗಳನ್ನು ನಿರ್ಮಿಸಲು ಸರ್ಕಾರವು ಉದ್ದೇಶಿಸಿದೆ? (ಈ ಯೋಜನೆಯ ವಿವರವನ್ನು ಒದಗಿಸುವುದು). | ಪ್ರಸ್ತುತ ಯಾವುದೂ ಇರುವುದಿಲ್ಲ. |

**ಸಂಖ್ಯೆ.ಕಸಂವಾ 166 ಕೆಒಎಲ್ ಆಕ 2022**

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು